**All India Radio: Bangalore**
**National Bulletin In Kannada**
**12.11.2025 07.35 a.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**12.11.2025 07.35 a.m.**

**<><><><>**

ಮುಖ್ಯಾಂಶಗಳು

೧. ದೆಹಲಿ ಸ್ಫೋಟ ಪ್ರಕರಣದ ಆರೋಪಿಗಳ ವಿರುದ್ಧ ಕಠಿಣ ಕಾನೂನು ಕ್ರಮ- ಪ್ರಧಾನಿ ನರೇಂದ್ರ ಮೋದಿ

೨. ಬಿಹಾರ ವಿಧಾನಸಭಾ ಚುನಾವಣೆ; ಎರಡನೇ ಹಂತದಲ್ಲಿ ಶೇಕಡ ೬೯.೧೨ ರಷ್ಟು ಮತದಾನ

೩. ಕೆನಡಾದಲ್ಲಿಂದು ಜಿ-೭ ವಿದೇಶಾಂಗ ಸಚಿವರ ಸಭೆಯಲ್ಲಿ ಕೇಂದ್ರ ಸಚಿವ ಡಾ.ಎಸ್.ಜೈಶಂಕರ್ ಭಾಗಿ

೪. ಮಹಿಳಾ ಟಿ-೨೦ ಅಂಧರ ವಿಶ್ವಕಪ್ ಕ್ರಿಕೆಟ್; ಶ್ರೀಲಂಕಾ ವಿರುದ್ಧ ಭಾರತ ತಂಡಕ್ಕೆ ಭರ್ಜರಿ ಜಯ

**<><><><>**

ದೆಹಲಿಯಲ್ಲಿ ನಡೆದ ಭೀಕರ ಸ್ಫೋಟದ ಸಂಚುಕೋರರನ್ನು ಯಾವುದೇ ಕಾರಣಕ್ಕೂ ಬಿಡುವುದಿಲ್ಲ. ತಪ್ಪಿತಸ್ಥರನ್ನು ಕಾನೂನು ಕ್ರಮಕ್ಕೆ ಒಳಪಡಿಸಲಾಗುವುದು ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಭೂತಾನ್‌ನ ಥಿಂಪುವಿನಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಪ್ರಧಾನಿ ಮೋದಿ, ಘಟನೆ ಕುರಿತು ತನಿಖಾ ಸಂಸ್ಥೆಗಳು ತನಿಖೆಯನ್ನು ತೀವ್ರಗೊಳಿಸಿವೆ. ಸೋಮವಾರ ಸಂಜೆ ನವದೆಹಲಿಯಲ್ಲಿ ನಡೆದ ಘಟನೆ ಎಲ್ಲರ ಹೃದಯವನ್ನು ತೀವ್ರವಾಗಿ ಕಲಕಿದೆ. ಸಂತ್ರಸ್ತರ ಕುಟುಂಬಗಳೊಂದಿಗೆ ಇಡೀ ರಾಷ್ಟ್ರ ನಿಂತಿದೆ ಎಂದು ಅವರು ಹೇಳಿದರು. ಶತಮಾನಗಳಿಂದ ಭಾರತ ಮತ್ತು ಭೂತನ್ ನಡುವಿನ ಸಂಬಂಧ ಸೌಹಾರ್ದಯುತ ಮತ್ತು ಸಾಂಸ್ಕೃತಿಕವಾಗಿದೆ. ಈ ಮಹತ್ವದ ಸಂದರ್ಭದಲ್ಲಿ ಭಾಗವಹಿಸುವುದು ಭಾರತದ ಬದ್ಧತೆಯಾಗಿದೆ ಎಂದು ಪ್ರಧಾನಿ ಮೋದಿ ಹೇಳಿದರು. ಇನ್ನೊಂದೆಡೆ, ಭಾರತ ಮತ್ತು ಭೂತಾನ್ ನಡುವಿನ ಯಶಸ್ವಿ ಇಂಧನ ಪಾಲುದಾರಿಕೆಯಲ್ಲಿ ಮತ್ತೊಂದು ಪ್ರಮುಖ ಮೈಲುಗಲ್ಲಾಗಿ ಪುನತ್ಸಂಗ್ಚು-೨ ಜಲವಿದ್ಯುತ್ ಯೋಜನೆಗೆ ಎರಡೂ ಕಡೆಯವರು ಸಹಿ ಹಾಕಿದರು. ಈ ವೇಳೆ, ಕಾರ್ಯಕ್ರಮ ಉದ್ದೇಶಿಸಿ ಪ್ರಧಾನಿ ನರೇಂದ್ರ ಮೋದಿ ಮಾತನಾಡಿದರು.

**<><><><>**

ದೆಹಲಿಯ ಕೆಂಪುಕೋಟೆಯ ಬಳಿ ಸೋಮವಾರ ಸಂಜೆ ನಡೆದ ಕಾರು ಸ್ಫೋಟ ಪ್ರಕರಣದ ತನಿಖೆಯನ್ನು ಕೇಂದ್ರ ಸರ್ಕಾರ ರಾಷ್ಟ್ರೀಯ ತನಿಖಾ ದಳ - ಎನ್‌ಐಎಗೆ ವಹಿಸಿದೆ. ಸ್ಫೋಟದ ನಂತರ ಪರಿಸ್ಥಿತಿಯನ್ನು ಪರಿಶೀಲಿಸಲು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ನವದೆಹಲಿಯ ತಮ್ಮ ನಿವಾಸದಲ್ಲಿ ಉನ್ನತ ಮಟ್ಟದ ಭದ್ರತಾ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿದ್ದರು. ಸಭೆಯಲ್ಲಿ ಗೃಹ ಕಾರ್ಯದರ್ಶಿ, ಗುಪ್ತಚರ ದಳದ ನಿರ್ದೇಶಕರು, ದೆಹಲಿ ಪೊಲೀಸ್ ಆಯುಕ್ತರು ಮತ್ತು ರಾಷ್ಟ್ರೀಯ ತನಿಖಾ ದಳದ ಮಹಾನಿರ್ದೇಶಕರು ಭಾಗವಹಿಸಿದ್ದರು. ಜಮ್ಮು ಮತ್ತು ಕಾಶ್ಮೀರದ ಪೊಲೀಸ್ ಮಹಾನಿರ್ದೇಶಕರು ವರ್ಚುಯಲ್ ಮೂಲಕ ಸಭೆಯಲ್ಲಿ ಪಾಲ್ಗೊಂಡಿದ್ದರು. ದೆಹಲಿಯಲ್ಲಿ ಎಲ್ಲ ಸೂಕ್ಷ್ಮ ಪ್ರದೇಶಗಳಲ್ಲಿ ಭದ್ರತೆಯನ್ನು ಬಿಗಿಗೊಳಿಸಲಾಗಿದೆ. ಘಟನೆಗೆ ಸಂಬಂಧಿಸಿದಂತೆ ದೆಹಲಿ ಪೊಲೀಸರು, ಕಾನೂನು ಬಾಹಿರ ಚಟುವಟಿಕೆಗಳ ತಡೆಗಟ್ಟುವಿಕೆ ಕಾಯ್ದೆ, ಸ್ಫೋಟಕ ಕಾಯ್ದೆ ಹಾಗೂ ಭಾರತೀಯ ನ್ಯಾಯ ಸಂಹಿತೆಯ ವಿವಿಧ ವಿಭಾಗಗಳ ಅಡಿಯಲ್ಲಿ ಪ್ರಕರಣ ದಾಖಲಿಸಿದ್ದಾರೆ. ಭದ್ರತಾ ಕಾರಣಗಳಿಂದಾಗಿ ಕೆಂಪುಕೋಟೆ ಮೆಟ್ರೊ ನಿಲ್ದಾಣವನ್ನು ಮುಚ್ಚಲಾಗುವುದು ಎಂದು ದೆಹಲಿ ಮೆಟ್ರೊ ರೈಲು ನಿಗಮ ತಿಳಿಸಿದೆ. ಅಲ್ಲದೇ ನಾಳೆವರೆಗೆ ಕೆಂಪುಕೋಟೆ ಸಂದರ್ಶಕರಿಗೆ ಮುಚ್ಚಿರುತ್ತದೆ. ದೆಹಲಿಯ ಕೆಂಪುಕೋಟೆ ಬಳಿ ಇದೇ ಸೋಮವಾರ ಕಾರೊಂದರಲ್ಲಿ ಸಂಭವಿಸಿದ ಸ್ಫೋಟದಲ್ಲಿ ೮ ಜನರು ಸಾವನ್ನಪ್ಪಿದ್ದು, ಹಲವರು ಗಾಯಗೊಂಡಿದ್ದಾರೆ.

**<><><><>**

ದೆಹಲಿ ಸ್ಫೋಟ ಘಟನೆಯಲ್ಲಿ ಮೃತಪಟ್ಟ ಮತ್ತು ಗಾಯಗೊಂಡವರ ಕುಟುಂಬಗಳಿಗೆ ದೆಹಲಿ ಸರ್ಕಾರ ಪರಿಹಾರ ಘೋಷಿಸಿದೆ. ಈ ಘಟನೆಯಲ್ಲಿ ಪ್ರಾಣ ಕಳೆದುಕೊಂಡವರ ಕುಟುಂಬಗಳಿಗೆ ೧೦ ಲಕ್ಷ ರೂಪಾಯಿಗಳ ಪರಿಹಾರ ನೀಡಲಾಗುವುದು ಎಂದು ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ ತಿಳಿಸಿದ್ದಾರೆ. ಶಾಶ್ವತ ಅಂಗವಿಕಲರಿಗೆ ೫ ಲಕ್ಷ ರೂಪಾಯಿ ಮತ್ತು ಗಂಭೀರವಾಗಿ ಗಾಯಗೊಂಡವರಿಗೆ ೨ ಲಕ್ಷ ರೂಪಾಯಿ ನೀಡಲಾಗುವುದು. ಗಾಯಾಳುಗಳಿಗೆ ಸರಿಯಾದ ಮತ್ತು ಗುಣಮಟ್ಟದ ಚಿಕಿತ್ಸೆ ನೀಡುವ ಜವಾಬ್ದಾರಿಯನ್ನು ದೆಹಲಿ ಸರ್ಕಾರ ತೆಗೆದುಕೊಳ್ಳುತ್ತದೆ ಎಂದು ಅವರು ಹೇಳಿದರು.

**<><><><>**

ಬಿಹಾರದಲ್ಲಿ ನಿನ್ನೆ ಎರಡನೇ ಮತ್ತು ಅಂತಿಮ ಹಂತದ ವಿಧಾನಸಭೆ ಚುನಾವಣೆಯ ಮತದಾನ ಬಹುತೇಕ ಶಾಂತಿಯುತವಾಗಿ ನಡೆಯಿತು. ಎರಡನೇ ಹಂತದಲ್ಲಿ ಶೇಕಡ ೬೯.೧೨ ರಷ್ಟು ಮತದಾನವಾಗಿದೆ ಎಂದು ಚುನಾವಣಾ ಆಯೋಗ ತಿಳಿಸಿದೆ. ಈ ಹಂತದಲ್ಲಿ ೨೦ ಜಿಲ್ಲೆಗಳ ೧೨೨ ಕ್ಷೇತ್ರಗಳಿಗೆ ಮತದಾನ ನಡೆಯಿತು. ಭದ್ರತಾ ಕಾರಣಗಳಿಂದಾಗಿ ೭ ಕ್ಷೇತ್ರಗಳಲ್ಲಿ ಸಂಜೆ ೫ ಗಂಟೆಗೆ ಮತದಾನ ಮುಕ್ತಾಯಗೊಂಡಿತು. ಉಳಿದ ಕ್ಷೇತ್ರಗಳಲ್ಲಿ ಬೆಳಗ್ಗೆ ೭ ಗಂಟೆಯಿಂದ ಸಂಜೆ ೬ ಗಂಟೆವರೆಗೆ ಮತದಾನ ನಡೆಯಿತು. ಈ ತಿಂಗಳ ೧೪ ರಂದು ಮತ ಎಣಿಕೆ ನಡೆಯಲಿದೆ. ಇದೇ ವೇಳೆ ಏಳು ರಾಜ್ಯಗಳ ೮ ವಿಧಾನಸಭಾ ಕ್ಷೇತ್ರಗಳಿಗೆ ನಿನ್ನೆ ಉಪಚುನಾವಣೆ ನಡೆಯಿತು. ಜಮ್ಮು

ಮತ್ತು ಕಾಶ್ಮೀರದ ಬಡ್ಗಾಂ ಹಾಗೂ ನಗ್ರೋಟಾ, ರಾಜಸ್ಥಾನದ ಅಂತಾ, ಜಾರ್ಖಂಡ್‌ನ ಘಟ್ಸಿಲಾ, ತೆಲಂಗಾಣದ ಜುಬಿಲಿ ಹಿಲ್ಸ್, ಪಂಜಾಬ್‌ನ ತರ್ನ್ ತರನ್, ಮಿಜೋರಾಂನ ದಂಪಾ ಮತ್ತು ಒಡಿಶಾದ ನುವಾಪಾಡಾ ಕ್ಷೇತ್ರಗಳಿಗೆ ಮತದಾನ ನಡೆಯಿತು. ಬಿಹಾರ ವಿಧಾನಸಭಾ ಚುನಾವಣೆಯ ಜೊತೆಗೆ ನವೆಂಬರ್ ೧೪ ರಂದು ಮತ ಎಣಿಕೆ ನಡೆಯಲಿದೆ.

**<><><><>**

ಕೆನಡಾದ ವಿದೇಶಾಂಗ ಸಚಿವೆ ಅನಿತಾ ಆನಂದ್ ಅವರ ಆಹ್ವಾನದ ಮೇರೆಗೆ ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಅವರು ಇಂದು ಕೆನಡಾದ ಒಂಟಾರಿಯೊಗೆ ಭೇಟಿ ನೀಡಲಿದ್ದು, ಜಿ-೭ ವಿದೇಶಾಂಗ ಸಚಿವರ ಸಭೆಯಲ್ಲಿ ಭಾಗವಹಿಸಲಿದ್ದಾರೆ. ಜಿ-೭ ವಿದೇಶಾಂಗ ಸಚಿವರ ಸಭೆಯ ಹೊರತಾಗಿ ಡಾ. ಜೈಶಂಕರ್ ಅವರು ದ್ವಿಪಕ್ಷೀಯ ಸಭೆಗಳನ್ನು ನಡೆಸುವ ನಿರೀಕ್ಷೆಯಿದೆ ಎಂದು ವಿದೇಶಾಂಗ ಸಚಿವರ ಭಾಗವಹಿಸುವಿಕೆಯು ಜಾಗತಿಕ ಸವಾಲುಗಳನ್ನು ಎದುರಿಸುವಲ್ಲಿ ಮತ್ತು ಅಂತಾರಾಷ್ಟ್ರೀಯ ವೇದಿಕೆಗಳಲ್ಲಿ ಜಾಗತಿಕ ದಕ್ಷಿಣದ ಧ್ವನಿಯನ್ನು ಬಲಪಡಿಸುವಲ್ಲಿ ಅಂತಾರಾಷ್ಟ್ರೀಯ ಪಾಲುದಾರರೊಂದಿಗೆ ಕೆಲಸ ಮಾಡುವ ಭಾರತದ ನಿರಂತರ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ ಎಂದು ಸಚಿವಾಲಯ ಹೇಳಿದೆ.

**<><><><>**

ಭಾರತದ ಕೈಗಾರಿಕಾ ಬೆಳವಣಿಗೆಯನ್ನು ವೇಗಗೊಳಿಸಲು ಗುಣಮಟ್ಟದ ನಿಯಂತ್ರಣ, ವ್ಯವಹಾರ ಮಾಡುವ ಸುಲಭತೆ ಮತ್ತು ಸುಸ್ಥಿರತೆಯ ಅಗತ್ಯವನ್ನು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಒತ್ತಿ ಹೇಳಿದ್ದಾರೆ. ನವದೆಹಲಿಯಲ್ಲಿ ನಡೆದ ಉದ್ಯೋಗ ಸಮಾಗಮ್ ೨೦೨೫ ಅನ್ನು ಉದ್ದೇಶಿಸಿ ಮಾತನಾಡಿದ ಅವರು, ಸ್ಪರ್ಧಾತ್ಮಕ ಕೈಗಾರಿಕಾ ಪರಿಸರ ವ್ಯವಸ್ಥೆಯನ್ನು ಬೆಳೆಸಲು ಭೂಮಿ ಲಭ್ಯತೆ, ದೃಢವಾದ ಮೂಲಸೌಕರ್ಯ, ಪ್ರೋತ್ಸಾಹ ಮತ್ತು ಭ್ರಷ್ಟಾಚಾರ-ಮುಕ್ತ ವಾತಾವರಣ, ಸಮಯಕ್ಕೆ ಅನುಗುಣವಾಗಿ ಅನುಮೋದನೆ ವ್ಯವಸ್ಥೆ ಪ್ರಮುಖವಾಗಿವೆ ಎಂದರು. ಭಾರತೀಯ ಉದ್ಯಮಗಳಿಗೆ ಜಾಗತಿಕ ಅವಕಾಶಗಳನ್ನು ವಿಸ್ತರಿಸುವಲ್ಲಿ ಮುಕ್ತ ವ್ಯಾಪಾರ ಒಪ್ಪಂದಗಳ ಪ್ರಮುಖ ಪಾತ್ರ ವಹಿಸಿವೆ ಎಂದು ಸಚಿವ ಪಿಯೂಷ್ ಗೋಯಲ್ ಹೇಳಿದರು. ೧೪ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಕೈಗಾರಿಕೆಗಳು ಮತ್ತು ವಾಣಿಜ್ಯ ಸಚಿವರು, ಹಿರಿಯ ಅಧಿಕಾರಿಗಳು ಮತ್ತು ಕೈಗಾರಿಕಾ ಪ್ರತಿನಿಧಿಗಳು ವ್ಯಾಪಾರ ಸುಧಾರಣಾ ಕ್ರಿಯಾ ಯೋಜನೆ ೨೦೨೪ ರ ಅಡಿಯಲ್ಲಿ ಪ್ರಗತಿಯನ್ನು ಪರಿಶೀಲಿಸಲು ಸಮ್ಮೇಳನದಲ್ಲಿ ಭಾಗವಹಿಸಿದ್ದರು.

**<><><><>**

ಈ ವರ್ಷದ ಜನವರಿಯಿಂದ ಅಕ್ಟೋಬರ್‌ವರೆಗೆ ಭಾರತೀಯ ರೈಲ್ವೆಯಾದ್ಯಂತ 'ನಾನ್ಹೆ ಫರಿಷ್ತೆ' ಕಾರ್ಯಾಚರಣೆಯ ಅಡಿಯಲ್ಲಿ, ರೈಲ್ವೆ ಪೊಲೀಸ್ ಪಡೆ ೧೯ ಸಾವಿರಕ್ಕೂ ಹೆಚ್ಚು ಮಕ್ಕಳನ್ನು ರಕ್ಷಿಸಿದೆ ಎಂದು ರೈಲ್ವೆ ಸಚಿವಾಲಯ ತಿಳಿಸಿದೆ. ಅದೇ ರೀತಿ, 'ಜೀವನ್ ರಕ್ಷಾ' ಕಾರ್ಯಾಚರಣೆಯ ಅಡಿಯಲ್ಲಿ, ಆರ್‌ಪಿಎಫ್ ಇದೇ ಅವಧಿಯಲ್ಲಿ ಎರಡು ಸಾವಿರಕ್ಕೂ ಹೆಚ್ಚು ಜೀವಗಳನ್ನು ಉಳಿಸಿದೆ ಎಂದು ರೈಲ್ವೆ ಸಚಿವಾಲಯ ಹೇಳಿದೆ. ಆಪರೇಷನ್ ನಾರ್ಕೋಸ್ ಅಡಿಯಲ್ಲಿ ೧೯೭ ಕೋಟಿಗೂ ಹೆಚ್ಚು ಮೌಲ್ಯದ ಮಾದಕ ದ್ರವ್ಯಗಳನ್ನು ಆರ್‌ಪಿಎಫ್ ವಶಪಡಿಸಿಕೊಂಡಿದೆ. ಆಪರೇಷನ್ ಅಮಾನತ್ ಅಡಿಯಲ್ಲಿ, ೭೦ ಕೋಟಿ ರೂಪಾಯಿಗಳಿಗಿಂತ ಹೆಚ್ಚು ಮೌಲ್ಯದ ೪೨ ಸಾವಿರಕ್ಕೂ ಹೆಚ್ಚು ವಸ್ತುಗಳನ್ನು ಆರ್‌ಪಿಎಫ್ ವಶಪಡಿಸಿಕೊಂಡಿದೆ ಎಂದು ಸಚಿವಾಲಯ ತಿಳಿಸಿದೆ.

**<><><><>**

ಆಪರೇಷನ್ ಸಿಂದೂರ-ಆಧುನಿಕ ಯುದ್ಧದ ಒಂದು ಆಕರ್ಷಕ ಉದಾಹರಣೆಯಾಗಿದೆ ಎಂದು ರಕ್ಷಣಾ ಸಿಬ್ಬಂದಿ ಮುಖ್ಯಸ್ಥ ಜನರಲ್ ಅನಿಲ್ ಚೌಹಾಣ್ ಹೇಳಿದ್ದಾರೆ. ನವದೆಹಲಿಯಲ್ಲಿ ನಡೆದ ದೆಹಲಿ ರಕ್ಷಣಾ ಸಂವಾದದಲ್ಲಿ ಮಾತನಾಡಿದ ಅವರು, ಆಪರೇಷನ್ ಸಿಂದೂರ-ಕಾರ್ಯಾಚರಣೆಯ ಸಮಯದಲ್ಲಿ ನಿಖರವಾದ ಸಾಮರ್ಥ್ಯಗಳು, ನೆಟ್‌ವರ್ಕ್-ಕೇಂದ್ರಿತ ಕಾರ್ಯಾಚರಣೆಗಳು, ಡಿಜಿಟೈಸ್ಡ್ ಇಂಟೆಲಿಜೆನ್ಸ್ ಪರಿಣಾಮಕಾರಿಯಾಗಿ ನಿಯೋಜಿಸಲಾಗಿದೆ ಎಂದರು. ಯುದ್ಧಭೂಮಿಯಲ್ಲಿ ಯಶಸ್ಸನ್ನು ನಿರ್ಧರಿಸುವಲ್ಲಿ ತಾಂತ್ರಿಕ ಶ್ರೇಷ್ಠತೆಯು ನಿರ್ಣಾಯಕ ಅಂಶವಾಗಿದೆ. ಯುದ್ಧವು ಮೂಲಭೂತವಾಗಿ ವಿಜಯವನ್ನು ಖಚಿತಪಡಿಸಿಕೊಳ್ಳಲು ಉಳಿದಿದೆ ಮತ್ತು ತಂತ್ರಜ್ಞಾನದಲ್ಲಿ ಮುನ್ನಡೆಸುವವರು ಅಂತಿಮವಾಗಿ ಮೇಲುಗೈ ಸಾಧಿಸುತ್ತಾರೆ ಎಂದು ಹೇಳಿದರು. ಉದಯೋನ್ಮುಖ ತಂತ್ರಜ್ಞಾನಗಳು, ವಿಕಸನಗೊಳ್ಳುತ್ತಿರುವ ಸಿದ್ಧಾಂತಗಳು ಮತ್ತು ಬದಲಾಗುತ್ತಿರುವ ಭೌಗೋಳಿಕ ರಾಜಕೀಯ ಚಲನಶೀಲತೆಯ ಆಳವಾದ ಪ್ರಭಾವವನ್ನು ಬೀರಿದೆ. ಆಧುನಿಕ ಯುದ್ಧವನ್ನು ತ್ವರಿತ ನಾವೀನ್ಯತೆ, ಕಾರ್ಯತಂತ್ರದ ಪಾಲುದಾರಿಕೆಗಳು ಮತ್ತು ಸಶಸ್ತ್ರ ಪಡೆಗಳೊಳಗಿನ ಸಾಂಸ್ಥಿಕ ರೂಪಾಂತರದಿಂದ ಮರುರೂಪಿಸಲಾಗುತ್ತಿದೆ ಎಂದು ಜನರಲ್ ಅನಿಲ್ ಚೌಹಾಣ್ ಪ್ರತಿಪಾದಿಸಿದರು. ಮನೋಹರ್ ಪರಿಕ್ಕರ್ ಇನ್ಸ್ಟಿಟ್ಯೂಟ್ ಫಾರ್ ಡಿಫೆನ್ಸ್ ಸ್ಟಡೀಸ್ ಅಂಡ್ ಅನಾಲಿಸಿಸ್ ಆಯೋಜಿಸಿರುವ ಎರಡು ದಿನಗಳ ಕಾರ್ಯಕ್ರಮವನ್ನು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಉದ್ಘಾಟಿಸಿದರು.

**<><><><>**

ಮೊಟ್ಟಮೊದಲ ಮಹಿಳಾ ಟಿ-೨೦ ಅಂಧರ ವಿಶ್ವಕಪ್ ಕ್ರಿಕೆಟ್‌ನಲ್ಲಿ ಭಾರತ ತನ್ನ ಅಭಿಯಾನವನ್ನು ಗೆಲುವಿನೊಂದಿಗೆ ಆರಂಭಿಸಿದೆ. ನವದೆಹಲಿಯಲ್ಲಿ ನಿನ್ನೆ ನಡೆದ ಆರಂಭಿಕ ಪಂದ್ಯದಲ್ಲಿ ಆತಿಥೇಯ ಶ್ರೀಲಂಕಾ ವಿರುದ್ಧ ಭಾರತ ತಂಡ ೧೦ ವಿಕೆಟ್‌ಗಳಿಂದ ಭರ್ಜರಿ ಜಯ ಸಾಧಿಸಿದೆ. ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಆಯ್ಕೆ ಮಾಡಿಕೊಂಡ ಶ್ರೀಲಂಕಾ, ೧೩.೩ ಓವರ್‌ಗಳಲ್ಲಿ ಕೇವಲ ೪೧ ರನ್ ಗಳಿಗೆ ತನ್ನೆಲ್ಲಾ ವಿಕೆಟ್‌ಗಳನ್ನು ಕಳೆದುಕೊಂಡಿತು. ಭಾರತದ ಪರ ನಾಯಕಿ ದೀಪಿಕಾ, ಗಂಗಾ ಕದಮ್ ಮತ್ತು ಜಮುನಾ ರಾಣಿ ತುಡು ತಲಾ ಒಂದು

ವಿಕೆಟ್ ಪಡೆದರು. ಇದಕ್ಕೆ ಉತ್ತರವಾಗಿ, ಭಾರತ ಕೇವಲ ಮೂರು ಓವರ್‌ಗಳಲ್ಲಿ ವಿಕೆಟ್ ನಷ್ಟವಿಲ್ಲದೆ ೪೩ ರನ್ ಗಳಿಸುವ ಮೂಲಕ ಗುರಿಯನ್ನು ಸುಲಭವಾಗಿ ತಲುಪಿತು. ಭಾರತ, ಶ್ರೀಲಂಕಾ, ಯುಎಸ್ಎ, ನೇಪಾಳ, ಆಸ್ಟ್ರೇಲಿಯಾ ಮತ್ತು ಪಾಕಿಸ್ತಾನ - ಆರು ತಂಡಗಳು ಪಂದ್ಯಾವಳಿಯಲ್ಲಿ ಭಾಗವಹಿಸಿವೆ. ಭಾರತ ಮತ್ತು ಶ್ರೀಲಂಕಾ ಆಯೋಜಿಸುತ್ತಿರುವ ಈ ಪಂದ್ಯಾವಳಿಯು, ಈ ತಿಂಗಳ ೧೩ ರವರೆಗೆ ನಡೆಯಲಿದ್ದು, ಫೈನಲ್ ಪಂದ್ಯ ಶ್ರೀಲಂಕಾದ ಕೊಲಂಬೊದಲ್ಲಿ ನಡೆಯಲಿದೆ

**<><>** ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು **<><>**

**<><>** ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ**<><>**